# ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ,
**6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-560003**

ಸಂಖ್ಯೆ:ಕಶಾಪ&ಮೌಮ್/ಪರೀಕ್ಷೆ/ಖಾ.ಆ.ನೋ/2022-23 ದಿನಾಂಕ:01.12.2022

**:: ಸುತ್ತೋಲೆ ::**

ವಿಷಯ:- 2023ರ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗೆ ಖಾಸಗಿ ಅಭ್ಯರ್ಥಿಗಳಾಗಿ ನೋಂದಾಯಿಸಿಕೊಳ್ಳುವ ದಿನಾಂಕವನ್ನು ವಿಸ್ತರಿಸುವ ಕುರಿತು.

ಉಲ್ಲೇಖ: 1. ಪಪೂಶಿಇ/ಪರೀಕ್ಷೆ/ಖಾ.ಅ.ನೋ/2022-23 ದಿನಾಂಕ 10.10.2022

2. ಈ ಕಛೇರಿ ಸುತ್ತೋಲೆ ಸಮ ಸಂಖ್ಯೆ ದಿನಾಂಕ:16.11.2022

* * * * * *

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ, 2023ರ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗೆ ಖಾಸಗಿ ಅಭ್ಯರ್ಥಿಗಳಾಗಿ ನೋಂದಾಯಿಸಿಕೊಳ್ಳಲು ಉಲ್ಲೇಖಿತ-2ರ ಸುತ್ತೋಲೆಯನ್ವಯ ದಿನಾಂಕ 28.11.2022 ರವರೆಗೆ 700/- ರೂ ಗರಿಷ್ಠ ದಂಡಶುಲ್ಕದೊಂದಿಗೆ ಅವಕಾಶ ನೀಡಲಾಗಿತ್ತು. ಆದರೆ ಪೋಷಕರು ಹಾಗೂ ವಿದ್ಯಾರ್ಥಿಗಳ ದೂರವಾಣಿ ಕರೆ ಮತ್ತು ಮನವಿ ಪತ್ರಗಳ ಮೇರೆಗೆ ಖಾಸಗಿ ಅಭ್ಯರ್ಥಿಯಾಗಿ ನೋಂದಾಯಿಸಿಕೊಳ್ಳುವ ದಿನಾಂಕವನ್ನು ಈ ಕೆಳಕಂಡಂತೆ ವಿಸ್ತರಿಸಿ ಆದೇಶಿಸಲಾಗಿದೆ.

| ಕ್ರಮ ಸಂಖ್ಯೆ | ವಿವರ | ಅಭ್ಯರ್ಥಿಗಳು ಕಾಲೇಜಿಗೆ ಶುಲ್ಕ ಪಾವತಿಸಲು ದಿನಾಂಕ: | ಕಾಲೇಜಿನವರು ಶುಲ್ಕವನ್ನು ಖಜಾನೆಗೆ ಸಂದಾಯ ಮಾಡುವ ದಿನಾಂಕ | ಕಾಲೇಜಿನವರು ಅರ್ಜಿಗಳನ್ನು ಆನ್‌ಲೈನ್‌ನಲ್ಲಿ ಭರ್ತಿ ಮಾಡಲು ಕಡೇ ದಿನಾಂಕ | ಸಂಬಂಧಿಸಿದ ಜಿಲ್ಲಾ ಉಪನಿರ್ದೇಶಕರ ಕಛೇರಿಗೆ ಅರ್ಜಿಗಳನ್ನು ಸಲ್ಲಿಸಬೇಕಾದ ದಿನಾಂಕ |
|---|---|---|---|---|---|
| 01 | ಶುಲ್ಕದ ಜೊತೆಗೆ 500/- ರೂ ದಂಡ ಶುಲ್ಕ ಮತ್ತು 700/- ರೂ ದಂಡ ಶುಲ್ಕದೊಂದಿಗೆ ವಿಶೇಷ ದಂಡ ಶುಲ್ಕ 1320 ರೂಗಳು. | 01.12.2022 ರಿಂದ 12.12.2022 | 13.12.2022 | 13.12.2022 | 14.12.2022 |

ಜಿಲ್ಲಾ ಉಪನಿರ್ದೇಶಕರು ಪ್ರಾಂಶುಪಾಲರಿಂದ ಸ್ವೀಕರಿಸಿದ ಅರ್ಜಿಗಳನ್ನು SATS Portal ನಲ್ಲಿ Update ಮಾಡಿರುವುದನ್ನು ಖಾತ್ರಿ ಪಡಿಸಿಕೊಂಡು Update ಮಾಡಿರುವುದಕ್ಕೆ ಸಂಬಂಧಿಸಿದಂತೆ ಮುಚ್ಚಳಿಕೆ ಪತ್ರ ಪಡೆದ ನಂತರ ಕಾಲೇಜುವಾರು ಕ್ರೋಢೀಕೃತ ವಿದ್ಯಾರ್ಥಿಗಳ ಪಟ್ಟಿ, ಶುಲ್ಕ ಪಾವತಿಸಿದ ಮೂಲ ಚಲನ್ ಹಾಗೂ ಮುಚ್ಚಳಿಕೆ ಪತ್ರವನ್ನು ಖುದ್ದಾಗಿ ಕೇಂದ್ರ ಕಛೇರಿಗೆ ಸಲ್ಲಿಸಬೇಕಾದ ದಿನಾಂಕ 16.12.2022.

01/12/2022

ಅಧ್ಯಕ್ಷರು

ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿ